ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001.
ದೂ. 080-22028032/34/ಫ್ಯಾಕ್ಸ್ 22028041

ದಿನಾಂಕ : 24-04-2015

# ಪತ್ರಿಕಾ ಆಮಂತ್ರಣ

| | | | |
|---|---|---|---|
| 1. | 2014 ನೇ ಸಾಲಿನ ಕರ್ನಾಟಕ ರಾಜ್ಯ ಪೊಲೀಸ್ ವಾರ್ಷಿಕ ಕ್ರೀಡಾಕೂಟದ ಸಮಾರೋಪ ಸಮಾರಂಭ:<br><br>ಮುಖ್ಯ ಅತಿಥಿ:<br><br>ಶ್ರೀ ಕೆ. ಜೆ. ಜಾರ್ಜ್,<br>ಗೃಹ ಸಚಿವರು.<br><br>ಬಹುಮಾನ ವಿತರಣೆ:<br><br>ಶ್ರೀಮತಿ ಸುಜಾ ಜಾರ್ಜ್,<br><br>ಸೂಚನೆ:<br><br>ಈ ಕಾರ್ಯಕ್ರಮಕ್ಕೆ ತೆರಳಲು ಬೆಂಗಳೂರು ನಗರ ಪೊಲೀಸ್ ಆಯುಕ್ತರ ಕಚೇರಿ ಮತ್ತು ಪೊಲೀಸ್ ಪ್ರಧಾನ ಕಚೇರಿಯಿಂದ ಸಂಜೆ 4-00 ಗಂಟೆಗೆ ವಾಹನ ವ್ಯವಸ್ಥೆ ಮಾಡಲಾಗಿದೆ.<br><br>ಸಂಪರ್ಕ:<br><br>ಮೊ. ಸಂಖ್ಯೆ 9480800728 | 25-4-2015<br>ಶನಿವಾರ<br>ಸಂಜೆ<br>4-30 ಗಂಟೆಗೆ | ಕೆ.ಎಸ್.ಆರ್.ಪಿ. ಪರೇಡ್ ಮೈದಾನ, ಕೋರಮಂಗಲ, ಬೆಂಗಳೂರು. |
| 2. | ತಿಂಗಳ ಚಿತ್ರ – ಯುವ ಕಲಾವಿದರ ಕೃತಿಗಳ ತಿಂಗಳ ಪ್ರದರ್ಶನ.<br><br>ಉದ್ಘಾಟನೆ:<br><br>ಶ್ರೀ ಅಪ್ಪಗೆರೆ ತಿಮ್ಮರಾಜು, ಜಾನಪದ ಕಲಾವಿದರು.<br><br>ಅಧ್ಯಕ್ಷತೆ:<br><br>ಡಾ. ಎಂ.ಎಸ್. ಮೂರ್ತಿ, ಅಧ್ಯಕ್ಷರು, ಕನ್ನಡ ಲಲಿತಕಲಾ ಅಕಾಡೆಮಿ, | 25-4-2015<br>ಶನಿವಾರ<br>ಸಂಜೆ<br>5-00 ಗಂಟೆಗೆ | ವರ್ಣ ಗ್ಯಾಲರಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಪರಿಸರ ಪ್ರಶಸ್ತಿಗಾಗಿ ಅರ್ಜಿ / ನಾಮ ನಿರ್ದೇಶನ ಆಹ್ವಾನ

ಬೆಂಗಳೂರು ಏಪ್ರಿಲ್ 24 (ಕರ್ನಾಟಕ ವಾರ್ತೆ)

ಪರಿಸರ ಸಂರಕ್ಷಣೆಗಾಗಿ ಗಣನೀಯ ಸೇವೆ ಸಲ್ಲಿಸಿದ ವ್ಯಕ್ತಿ/ಸಂಸ್ಥೆಗಳಿಂದ 2014-15 ನೇ ಸಾಲಿನ ರಾಜ್ಯ ಪರಿಸರ ಪ್ರಶಸ್ತಿಗಾಗಿ ಅರ್ಜಿ/ನಾಮನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.

ಈ ಪ್ರಶಸ್ತಿ ತಲಾ ಒಂದು ಲಕ್ಷ ರೂ. ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಈ ಪ್ರಶಸ್ತಿಯನ್ನು ವ್ಯಕ್ತಿ ಮತ್ತು ಸಂಸ್ಥೆಗಳ (ಸರ್ಕಾರಿ ವಲಯ, ಸರ್ಕಾರೇತರ ಸಂಸ್ಥೆ, ಕಂಪನಿ, ಟ್ರಸ್ಟ್‌ಗಳು ಇತರೆ) ಪರಿಸರ ಸಂರಕ್ಷಣೆ ಮತ್ತು ಪರಿಸರ ವ್ಯವಸ್ಥಾಪನೆ ಕ್ಷೇತ್ರಗಳಲ್ಲಿನ ಗಣನೀಯ ಸೇವೆಗಾಗಿ ನೀಡಲಾಗುವುದು.

ಈ ಪ್ರಶಸ್ತಿಗಳನ್ನು ರಾಜ್ಯದ ಮೂರು ವಲಯಗಳಲ್ಲಿ ಅಂದರೆ ಮಲೆನಾಡು, ಕರಾವಳಿ ವಲಯ (ಬೆಳಗಾವಿ, ಶಿವಮೊಗ್ಗ, ಚಿಕ್ಕಮಗಳೂರು, ಮೈಸೂರು, ಕೊಡಗು, ಚಾಮರಾಜನಗರ, ಹಾಸನ, ದಕ್ಷಿಣ ಕನ್ನಡ ಜಿಲ್ಲೆ, ಉತ್ತರ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆಗಳು) ದಕ್ಷಿಣ ವಲಯ (ಮಂಡ್ಯ, ರಾಮನಗರ, ಬೆಂಗಳುರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ ಮತ್ತು ತುಮಕೂರು ಜಿಲ್ಲೆಗಳು ಮತ್ತು ಉತ್ತರ ವಲಯ (ದಾವಣಗೆರೆ, ಚಿತ್ರದುರ್ಗ, ಹಾವೇರಿ, ಧಾರವಾಡ, ಗದಗ, ಬಳ್ಳಾರಿ, ಬಾಗಲಕೋಟೆ, ವಿಜಯಪುರ, ಬೀದರ್ ಕಲ್ಬುರ್ಗಿ, ಯಾದಗಿರಿ, ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳು) ಗಳ ತಲಾ ಒಬ್ಬರು ವ್ಯಕ್ತಿ ಮತ್ತು ಒಂದು ಸಂಸ್ಥೆಗೆ ನೀಡಲಾಗುವುದು.

ಅರ್ಜಿಗಳನ್ನು ಸರ್ಕಾರದ ಕಾರ್ಯದರ್ಶಿಗಳು, ಅರಣ್ಯ, ಜೀವಿಶಾಸ್ತ್ರ, ಪರಿಸರ ಇಲಾಖೆ, (ಜೀವಿಶಾಸ್ತ್ರ ಮತ್ತು ಪರಿಸರ), ಕೊಠಡಿ ಸಂಖ್ಯೆ 708, 7ನೇ ಮಹಡಿ, ಬಹುಮಹಡಿಗಳ ಕಟ್ಟಡ, 4ನೇ ಹಂತ,

ಬೆಂಗಳೂರು – 560 001, ಇವರಿಗೆ 12-5-2015ರೊಳಗಾಗಿ ಕಳುಹಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗೆ www.parisara.kar.nic.in, www.kspcb.kar.nic.in, www.empri.kar.nic.in, www.kbb.kar.nic.in, www.karunadu.gov.in/lda ಗಳನ್ನು ಸಂಪರ್ಕಿಸಬಹುದಾಗಿದೆ.

*****

ಪಹೋ: ಬಾಬು:ಜಿಪಿಆರ್.

# ಕಲಾವಿದರ ಪಟ್ಟಿಗೆ ಮಾಹಿತಿ ನೀಡಿ

ಬೆಂಗಳೂರು ಏಪ್ರಿಲ್ 24 (ಕರ್ನಾಟಕ ವಾರ್ತೆ)

ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯು ರಾಜ್ಯದ ಸಂಗೀತ ಮತ್ತು ನೃತ್ಯ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಕಲಾವಿದರ ಪುಸ್ತಿಕೆಯನ್ನು ಎರಡು ಭಾಗಗಳಲ್ಲಿ ಪ್ರಕಟಿಸಲಿದೆ.

30 ವರ್ಷದ ಒಳಗಿನ 'ಯುವ ಕಲಾವಿದರು' ಹಾಗೂ 30 ವರ್ಷ ಮೇಲ್ಪಟ್ಟ 'ಹಿರಿಯ ಕಲಾವಿದರು' ಇದಕ್ಕಾಗಿ ಮೇಲ್ಕಂಡ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಕಲಾವಿದರು ತಮ್ಮ ಸ್ವವಿವರ ಹಾಗೂ ಬಣ್ಣದ ಛಾಯಾಚಿತ್ರವನ್ನು ಕನ್ನಡ ಭವನ, 2ನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು – 02 ಕ್ಕೆ 30–5–2015 ರ ಒಳಗೆ ಕಳುಹಿಸಲು ಕೋರಿದೆ.

ಹೆಚ್ಚಿನ ವಿವರಗಳಿಗೆ ದೂರವಾಣಿ 080–22215072 ನ್ನು ಸಂಪರ್ಕಿಸಬಹುದಾಗಿದೆ.

*****

ಪಹೋ:ಬಾಬು:ಜಿಪಿಆರ್.

## ಕೀ ಉತ್ತರ ಪ್ರಕಟ : ಆಕ್ಷೇಪಣೆ ಇದ್ದರೆ ಸಲ್ಲಿಸಿ

ಬೆಂಗಳೂರು ಏಪ್ರಿಲ್ 24 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ 19–04–2015 ರಂದು ನಡೆಸಿದ 2014 ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಪೂರ್ವಭಾವಿ ಪರೀಕ್ಷೆಯ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ http://kpsc.kar.nic.in ನಲ್ಲಿ ಪ್ರಕಟಿಸಿದೆ.

ಕೀ ಉತ್ತರಗಳ ಬಗ್ಗೆ ಏನಾದರೂ ಆಕ್ಷೇಪಣೆಗಳು ಇದ್ದಲ್ಲಿ ಅಭ್ಯರ್ಥಿಗಳು ಇದನ್ನು ಪುಷ್ಟೀಕರಿಸುವ ಆಧಾರಗಳುಳ್ಳ ಪುಸ್ತಕಗಳ ಹೆಸರು, ಲೇಖಕರ ಹೆಸರು, ಪ್ರಕಾಶನ, ವಿಷಯ, ಪ್ರಶ್ನೆ ಪುಸ್ತಿಕೆಯ ಶ್ರೇಣಿ, ಪ್ರಶ್ನೆ ಸಂಖ್ಯೆ ಇತ್ಯಾದಿ ವಿವರಣೆಯೊಂದಿಗೆ ನಿಗದಿತ ನಮೂನೆಯಲ್ಲಿ ದಿನಾಂಕ 04–05–2015 ರ ಕಚೇರಿ ವೇಳೆಯೊಳಗಾಗಿ ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು – 560 001 ಇವರಿಗೆ ಸಲ್ಲಿಸಬಹುದಾಗಿದೆ. ನಿಗದಿತ ನಮೂನೆಯನ್ನು ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

*****

ಪಹೋ:ಬಾಬು:ಜಿಪಿಆರ್.

# ರಾಜ್ಯಾದ್ಯಂತ 277 ಹೊಸ ಕೃಷಿ ಯಂತ್ರಧಾರೆ ಕೇಂದ್ರಗಳ ಸ್ಥಾಪನೆಗೆ ಚಿಂತನೆ

**ಕೃಷಿ ಸಚಿವ – ಕೃಷ್ಣ ಭೈರೇಗೌಡ**

**ಬೆಂಗಳೂರು ಏಪ್ರಿಲ್ 24 (ಕರ್ನಾಟಕ ವಾರ್ತೆ)**

ಮುಂದಿನ ವರ್ಷದಲ್ಲಿ ರಾಜ್ಯಾದ್ಯಂತ ಇನ್ನೂ ಹೊಸ 277 ಕೃಷಿ ಯಂತ್ರಧಾರೆ ಕೇಂದ್ರಗಳನ್ನು ತೆರೆಯಲು ಉದ್ದೇಶಿಸಲಾಗಿದೆ ಎಂದು ಕೃಷಿ ಸಚಿವ ಕೃಷ್ಣ ಭೈರೇಗೌಡ ಅವರು ತಿಳಿಸಿದರು.

ಇಂದು ಕೃಷಿ ಇಲಾಖೆಯು ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದ ಆವರಣದಲ್ಲಿ ಕೃಷಿ ಯಂತ್ರೋಪಕರಣ ತಯಾರಿಕಾ ಕಂಪನಿಗಳ ಸಹಯೋಗದೊಂದಿಗೆ ಏರ್ಪಡಿಸಿದ್ದ ಕೃಷಿ ಯಂತ್ರೋಪಕರಣ ಕಾರ್ಯಾಗಾರದಲ್ಲಿ ಪ್ರದರ್ಶಿಸಲಾಗಿದ್ದ ಹೊಸ ಕೃಷಿ ಯಂತ್ರೋಪಕರಣಗಳ ಪ್ರಾತ್ಯಾಕ್ಷಿಕೆಯನ್ನು ವೀಕ್ಷಿಸಿ ಮಾತನಾಡಿದ ಸಚಿವರು, ಸಣ್ಣ ರೈತರು ಯಂತ್ರೋಪಕರಣ ಖರೀದಿಗೆ ಹೆಚ್ಚಿನ ಬಂಡವಾಳ ಹೂಡಲು ಸಾಧ್ಯವಿಲ್ಲದಿರುವ ಹಿನ್ನೆಲೆಯಲ್ಲಿ ಸರ್ಕಾರವೇ ಖಾಸಗಿ ಕಂಪನಿಗಳಿಂದ ಯಂತ್ರಗಳನ್ನು ಖರೀದಿಸಿ ಬಾಡಿಗೆ ಆಧಾರದಲ್ಲಿ ರೈತರಿಗೆ ಯಂತ್ರಗಳನ್ನು ಒದಗಿಸುವ ನಿಟ್ಟಿನಲ್ಲಿ ಈಗಾಗಲೇ ರಾಜ್ಯಾದ್ಯಂತ 183 ಕೃಷಿ ಯಂತ್ರಧಾರೆ ಕೇಂದ್ರಗಳನ್ನು ತೆರೆಯಲಾಗಿದೆ.

ಈ ಕೇಂದ್ರಗಳಲ್ಲಿ ಮಾರುಕಟ್ಟೆಯ ಬೆಲೆಗಿಂತ ಕಡಿಮೆ ದರದಲ್ಲಿ ರೈತರಿಗೆ ಯಂತ್ರೋಪಕರಣಗಳನ್ನು ಬಾಡಿಗೆಗೆ ನೀಡಲಾಗುತ್ತಿದ್ದು, ರೈತರು ಇದರ ಉಪಯೋಗವನ್ನು ಪಡೆದುಕೊಳ್ಳುತ್ತಿರುವ ಹಿನ್ನೆಲೆಯಲ್ಲಿ ಮುಂದಿನ ವರ್ಷದಲ್ಲಿ ಇನ್ನೂ ಹೆಚ್ಚು ಕೃಷಿ ಯಂತ್ರಧಾರೆ ಕೇಂದ್ರಗಳನ್ನು ತೆರೆಯಲು ಉದ್ದೇಶಿಸಲಾಗಿದೆ ಎಂದರು.

ಕೃಷಿ ಕಾರ್ಮಿಕರು, ಕಾರ್ಖಾನೆಗಳು ಕಟ್ಟಡ ನಿರ್ಮಾಣ ಮುಂತಾದ ಕೆಲಸಗಳಿಗಾಗಿ ನಗರಕ್ಕೆ ವಲಸೆ ಬರುತ್ತಿರುವ ಹಿನ್ನೆಲೆಯಲ್ಲಿ ಕೃಷಿ ಕಾರ್ಮಿಕರ ಕೊರತೆ ಹೆಚ್ಚಾಗುತ್ತಿದೆ. ಆದ್ದರಿಂದ ಕೃಷಿ ಕಾರ್ಮಿಕರ ಕೊರತೆಗೆ ಪರಿಹಾರವಾಗಿ ಸರ್ಕಾರವು ಆಧುನಿಕ ಕೃಷಿ ಯಂತ್ರೋಪಕರಣ ಬಳಕೆಗೆ ಹೆಚ್ಚಿನ ಆಧ್ಯತೆಯನ್ನು ನೀಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಕೃಷಿ ಕಾರ್ಮಿಕರ ಕೊರತೆಯನ್ನು ಹೊಸ ಯಂತ್ರೋಪಕರಣಗಳ ಬಳಕೆಯಿಂದ ಮಾತ್ರ ನೀಗಿಸಲು ಸಾಧ್ಯ. ಹೀಗಾಗಿ ರೈತರಿಗೆ ಕೃಷಿಯಲ್ಲಿ ನೆರವಾಗುವ ಯಂತ್ರೋಪಕರಣಗಳನ್ನು ತಯಾರಿಸುವಂತೆ ಕೃಷಿ ಯಂತ್ರೋಪಕರಣ ತಯಾರಿಕಾ ಕಂಪನಿಗಳಿಗೆ ಕೃಷಿ ಇಲಾಖೆ ವತಿಯಿಂದ ಸಲಹೆ ಸೂಚನೆಗಳನ್ನು ನೀಡಲಾಗುತ್ತಿದೆ. ಹಾಗೂ ರೈತರಿಗೆ ಹೊಸ ಯಂತ್ರಗಳ ಪರಿಚಯವನ್ನು ಮಾಡುವ ಸಲುವಾಗಿ ರೈತರಿಗೆ ಯಂತ್ರೋಪಕರಣಗಳ ಕುರಿತು ಅರಿವನ್ನು ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆಯ ಆಯುಕ್ತ ಸುಬೋಧ್ ಯಾದವ್, ನಿರ್ದೇಶಕ ಧರ್ಮರಾಜನ್, ಅಪರ ನಿರ್ದೇಶಕ ನಾರಾಯಣ ರೆಡ್ಡಿ ಅವರು ಸೇರಿದಂತೆ ಹಿರಿಯ ಅಧಿಕಾರಿಗಳು ಹಾಗೂ ಕೃಷಿ ಯಂತ್ರೋಪಕರಣ ತಯಾರಿಕಾ ಕಂಪನಿಗಳ ಮಾಲೀಕರು ಉಪಸ್ಥಿತರಿದ್ದರು.

ಪಹೋ:ಪೂರ್ಣಿಮ:ಜಿಪಿಆರ್.